ಪ್ರ-59
ನಿ-330
146ನೇ ಅಧಿವೇಶನ
ಕಂಪ್ಯೂಟರ್

ಮಾನ್ಯ ವಿಧಾನ ಪರಿಷತ್ ಸದಸ್ಯರುಗಳಾದ ಶ್ರೀ ಶ್ರೀ ಕೆ.ಟಿ.ಶ್ರೀಕಂಠೇಗೌಡ, ಶ್ರೀ ಶಶೀಲ್ ಜಿ.ನಮೋಶಿ ಹಾಗೂ ಶ್ರೀ ಎಸ್.ಎಲ್.ಬೋಜೇಗೌಡ ಇವರುಗಳು ನಿಯಮ-330ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ.

ವಿಷಯ:-

ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದಲ್ಲಿ ಕ್ರೋಢೀಕೃತ ವೇತನದಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಕಳೆದ 10 ತಿಂಗಳಿಂದ ವೇತನ ಪಾವತಿಯಾಗದಿರುವ ಬಗ್ಗೆ ಹಾಗೂ ಸೇವೆಯಿಂದ ಹೊರಗುಳಿಸಿ ಅನ್ಯಾಯವಾಗಿರುವ ಬಗ್ಗೆ.

ಉತ್ತರ:-

ಆರ್ಥಿಕ ಇಲಾಖೆಯ ನಿರ್ದೇಶನದಂತೆ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ವಿಶ್ವವಿದ್ಯಾಲಯಗಳಲ್ಲಿ ಸರ್ಕಾರದ ಪೂರ್ವಾನುಮೋದನೆ ಪಡೆಯದೆ ಮಂಜೂರಾದ ಹುದ್ದೆಗಳಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ತಾತ್ಕಾಲಿಕ/ಗುತ್ತಿಗೆ/ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಂಡಿರುವ ಸಿಬ್ಬಂದಿಗಳನ್ನು ಕೂಡಲೇ ವಿಶ್ವವಿದ್ಯಾಲಯದ ಸೇವೆಯಿಂದ ಬಿಡುಗಡೆಗೊಳಿಸುವಂತೆ ಎಲ್ಲಾ ವಿಶ್ವವಿದ್ಯಾಲಯಗಳ ಕುಲಸಚಿವರಿಗೆ ದಿನಾಂಕ: 06.04.2021ರ ಸುತ್ತೋಲೆ ಮುಖಾಂತರ ನಿರ್ದೇಶಿಸಲಾಗಿದೆ.

ಈ ಹಿನ್ನಲೆಯಲ್ಲಿ, ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದಲ್ಲಿ ಸರ್ಕಾರದ ಪೂರ್ವಾನುಮೋದನೆ ಪಡೆಯದೆ ನೇಮಕ ಮಾಡಿಕೊಂಡಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಕಳೆದ ಹತ್ತು ತಿಂಗಳ ವೇತನಕ್ಕಾಗಿ ಸರ್ಕಾರದಿಂದ ವಿಶ್ವವಿದ್ಯಾಲಯಗಳಿಗೆ ಅನುದಾನ ಒದಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಸಂಖ್ಯೆ: ಇಡಿ 46 ಹೆಚ್‌ಪಿಯು 2022)

**(ಡಾ: ಅಶ್ವಥ್ ನಾರಾಯಣ ಸಿ.ಎನ್)**
ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಹಾಗೂ ಜೀವನೋಪಾಯ ಸಚಿವರು